ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಬಿಟಿಇ/136/ಇಸಿಎಸ್(3)/2019

ಕಾರ್ಯದರ್ಶಿಯವರ ಕಛೇರಿ
ತಾಂತ್ರಿಕ ಪರೀಕ್ಷಾ ಮಂಡಳಿ
ಅರಮನೆ ರಸ್ತೆ, ಬೆಂಗಳೂರು-01
ದಿನಾಂಕ: 28.11.2019.

**ಸುತ್ತೋಲೆ**

ವಿಷಯ : 2019-20 ನೇ ಸಾಲಿನ ಸಮ ಸೆಮಿಸ್ಟರ್‌ಗಳ ಶೈಕ್ಷಣಿಕ ವೇಳಾಪಟ್ಟಿ ಹಾಗೂ 2020 ರ ಮಾರ್ಚ್/ಏಪ್ರಿಲ್ ಡಿಪ್ಲೊಮಾ ಸೆಮಿಸ್ಟರ್ ಪರೀಕ್ಷೆ ಚಟುವಟಿಕೆಗಳ ಬಗ್ಗೆ ಮಾಹಿತಿ.

ಉಲ್ಲೇಖ :(1) ಈ ಕಛೇರಿ ಸುತ್ತೋಲೆ ಸಂಖ್ಯೆ: ಡಿಟಿಇ/18/ಎಸಿಎಂ(2)/2019-20, ದಿನಾಂಕ: 15.06.2019.

*-*-*-*-*

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ(1) ರಲ್ಲಿ 2019-20 ನೇ ಸಾಲಿನ ಶೈಕ್ಷಣಿಕ ಚಟುವಟಿಕೆಯ ವೇಳಾಪಟ್ಟಿಯನ್ನು ಈಗಾಗಲೇ ಪ್ರಕಟಿಸಲಾಗಿದ್ದು ಮತ್ತೊಮ್ಮೆ ಗಮನಸೆಳೆಯಲಾಗಿದೆ.

| ಕ್ರ.ಸಂ | ಪರೀಕ್ಷಾ ಕಾರ್ಯಗಳ ವಿವರ | ನಿಗದಿತ ದಿನಾಂಕ |
|---|---|---|
| 1. | ಪ್ರಸಕ್ತ ಶೈಕ್ಷಣಿಕ ಸಾಲಿನ 2,4,6ನೇ ಸೆಮಿಸ್ಟರ್ ತರಗತಿಗಳ ಪ್ರಾರಂಭ | 02.12.2019 |
| 2. | ಆಂತರಿಕ ಪರೀಕ್ಷೆ | ಪ್ರಥಮ : 6ನೇ ವಾರದಲ್ಲಿ<br>ದ್ವಿತೀಯ : 10ನೇ ವಾರದಲ್ಲಿ<br>ತೃತೀಯ : 14ನೇ ವಾರದಲ್ಲಿ |
| 3. | ಮಧ್ಯಂತರ ತರಗತಿಗಳ ಹಾಜರಾತಿ ಪರಿಶೀಲನೆ ಮತ್ತು ವಿದ್ಯಾರ್ಥಿಗಳಿಗೆ/ಪೋಷಕರಿಗೆ ಸೂಚನೆ ನೀಡುವುದು | 08ನೇ ವಾರದಲ್ಲಿ |
| 4. | ಆಂತರಿಕ ಪರೀಕ್ಷೆಯ ಅಂಕಗಳ ಪರಿಶೀಲನೆ/ಲೆಕ್ಕಾಚಾರ | 15ನೇ ವಾರದಲ್ಲಿ |
| 5. | ಪ್ರಸಕ್ತ ಶೈಕ್ಷಣಿಕ ಸಾಲಿನ 2,4,6ನೇ ಸೆಮಿಸ್ಟರ್ ತರಗತಿಗಳ ಮುಕ್ತಾಯ | 23.03.2020 |
| 6. | 02, 04 ಮತ್ತು 06ನೇ ಸೆಮಿಸ್ಟರ್/ವಾರ್ಷಿಕ ಪರೀಕ್ಷೆಗಳು (ಥಿಯರಿ ಮತ್ತು ಪ್ರಾಯೋಗಿಕ) | ಪ್ರಾಯೋಗಿಕ ಪರೀಕ್ಷೆ : 26.03.2020<br>ಥಿಯರಿ ಪರೀಕ್ಷೆ : 09.04.2020 |

ಸಂಸ್ಥೆಗಳಲ್ಲಿ ಪ್ರಾಚಾರ್ಯರು ಬಿಟಿಇಲಿಂಕ್ಸ್ ಆನ್‌ಲೈನ್ ವೆಬ್‌ಪೋರ್ಟಲ್ ಅನ್ನು ತಾವೇ ಸ್ವತಃ ಉಪಯೋಗಿಸುವುದರ ಜೊತೆಗೆ ಕನಿಷ್ಠ ಇಬ್ಬರು ನುರಿತ ಉಪನ್ಯಾಸಕರುಗಳನ್ನು ವೆಬ್‌ಪೋರ್ಟಲ್ ಉಪಯೋಗಿಸಲು ಕಡ್ಡಾಯವಾಗಿ ನಿಯುಕ್ತಿಗೊಳಿಸಲು ತಿಳಿಸಲಾಗಿದೆ.

ಪರೀಕ್ಷಾ ದಿನಾಂಕಗಳಲ್ಲಿ ಯಾವದೇ ಬದಲಾವಣೆಗಳಿರುವುದಿಲ್ಲ. ಪ್ರಯುಕ್ತ ಪ್ರಸಕ್ತ ಸಾಲಿನ ಎಲ್ಲಾ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ, ಸದರಿ ಶೈಕ್ಷಣಿಕ ವರ್ಷದ ಪಠ್ಯಕ್ರಮವನ್ನು ವಿಶೇಷ ತರಗತಿಗಳನ್ನು ನಡೆಸುವುದೂ ಸೇರಿದಂತೆ ಪಾಠ ಪ್ರವಚನಗಳನ್ನು ನಿಗದಿತ ಅವಧಿಯಲ್ಲಿ ಪೂರೈಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಪ್ರಾಚಾರ್ಯರುಗಳಿಗೆ ಸೂಚಿಸಲಾಗಿದೆ.

28/11/19

ಕಾರ್ಯದರ್ಶಿ
ತಾಂತ್ರಿಕ ಪರೀಕ್ಷಾ ಮಂಡಳಿ

ಇವರಿಗೆ : ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ – ಮಾಹಿತಿ ಮತ್ತು ಮುಂದಿನ ಕ್ರಮಕ್ಕಾಗಿ.

ಪ್ರತಿ : ಇ-ಆಡಳಿತ – ಅಂತರ್ಜಾಲದಲ್ಲಿ ಪ್ರಕಟಿಸಲು.